# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 332 |
| ಸದಸ್ಯರ ಹೆಸರು | : | ಶ್ರೀ ಟಿ.ಎ.ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 14-02-2023 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಕೆಲವು ದಿನಗಳ ಹಿಂದೆ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಪ್ರತಿಭಟನೆ ನಡೆಸಿದ್ದು, ಅವರ ಪ್ರಮುಖ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮದ ವಿವರ ಈ ಕೆಳಕಂಡಂತಿದೆ.<br><br>ಸರ್ಕಾರದ ಆದೇಶ ದಿನಾಂಕ: 04.02.2023 ರಲ್ಲಿ 2023-24ನೇ ಸಾಲಿನಿಂದ ಉಪಧನ (Gratuity) ಪಾವತಿಸಲು ಮಂಜೂರಾತಿ ನೀಡಲಾಗಿದೆ. ಅಂಗನವಾಡಿ ಕೇಂದ್ರಗಳ ವೇಳಾಪಟ್ಟಿಯನ್ನು ಬದಲಾಯಿಸಿ ಸುತ್ತೋಲೆ ಹೊರಡಿಸಲಾಗಿದೆ. ಯೋಜನೇತರ ಕೆಲಸಗಳಿಗೆ ನಿಯೋಜಿಸದಂತೆ ಪತ್ರ ಬರೆಯಲಾಗಿದೆ. ಸೇವಾ ನಿಯಮ ರಚಿಸಲು ಕ್ರಮ ವಹಿಸಲಾಗುತ್ತಿದೆ. SSLC ಪಾಸಾದ ಸಹಾಯಕಿಯರು / ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮುಂಬಡ್ತಿ ನೀಡಲು ತಿದ್ದುಪಡಿ ಆದೇಶ ಹೊರಡಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಸೇವೆಯು ಗೌರವ ಧನದ ಸೇವೆಯಾಗಿರುವುದರಿಂದ, ಕನಿಷ್ಟ ವೇತನ ಮತ್ತು ಇ.ಎಸ್.ಐ. ಸೌಲಭ್ಯಕ್ಕೆ ಅವಕಾಶವಿರುವುದಿಲ್ಲ. |
| ಆ) | ಸರ್ವೋಚ್ಛ ನ್ಯಾಯಾಲಯವು ನಿವೃತ್ತ ಅಂಗನವಾಡಿ ಕಾರ್ಯಕರ್ತೆಯರಿಗೆ ನಿವೃತ್ತಿ ಉಪದಾನ ಹಾಗೂ ಪಿಂಚಣಿ ನೀಡುವಂತೆ ಆದೇಶಿಸಿದ್ದರೂ ಸಹ ಅದನ್ನು ನೀಡದಿರುವುದಕ್ಕೆ ಕಾರಣಗಳೇನು; | ಸರ್ಕಾರದ ಆದೇಶ ದಿನಾಂಕ: 04.02.2023 ರಲ್ಲಿ ರಾಜ್ಯದಲ್ಲಿನ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರು ಹಾಗೂ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ 2023-24ನೇ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ ನಿವೃತ್ತಿ ಉಪಧನ ನೀಡಲು ಆಡಳಿತಾತ್ಮಕ ಅನುಮತಿ ನೀಡಿ ಆದೇಶಿಸಲಾಗಿದೆ. |
| ಇ) | ರಾಜ್ಯದ ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಅಂಗನವಾಡಿ ಸಹಾಯಕಿಯರಿಗೆ ನೀಡುತ್ತಿರುವ ಮಾಸಿಕ ಗೌರವಧನ ಎಷ್ಟು; ಎಷ್ಟು ತಿಂಗಳಿನಿಂದ ಬಾಕಿ ಇದೆ; ಬಾಕಿ ಉಳಿಯಲು ಕಾರಣಗಳೇನು? | ಪ್ರಸ್ತುತ ರಾಜ್ಯದ ಅಂಗನವಾಡಿ ಕಾರ್ಯಕರ್ತೆ, ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನ ಈ ಕೆಳಕಂಡಂತಿರುತ್ತದೆ:- |

| ವಿವರ | ವಿಂಗಡನೆ | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಗೌರವಧನ | ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ನೀಡುತ್ತಿರುವ ಗೌರವಧನ | ಒಟ್ಟು |
|---|---|---|---|---|
| ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 4500 | 6500 | 11000 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 6750 | 11250 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 7000 | 11500 |
| ಅಂಗನವಾಡಿ ಸಹಾಯಕಿ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 2500 | 3750 | 6250 |

| | | | | |
|---|---|---|---|---|
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 6500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 6750 |
| ಮಿನಿ ಅಂಗನವಾಡಿ ಕಾರ್ಯಕರ್ತೆ | 10 ವರ್ಷ ಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 3500 | 3750 | 7250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 7500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 7750 |

ಡಿಸೆಂಬರ್-2022 ರವರೆಗೆ ಎಲ್ಲಾ ಜಿಲ್ಲೆಗಳ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರಿಗೆ ಗೌರವಧನವನ್ನು ಪಾವತಿಸಲಾಗಿದೆ. ಜನವರಿ-2023 ರ ಅಂತ್ಯಕ್ಕೆ ಕೆಲವು ಶಿಶು ಅಭಿವೃದ್ಧಿ ಯೋಜನಾ ಕಛೇರಿಗಳಲ್ಲಿನ ಖಜಾನೆ-2 ರ ತಾಂತ್ರಿಕ ಸಮಸ್ಯೆ ಮತ್ತು ಆಡಳಿತಾತ್ಮಕ ಕಾರಣಗಳಿಂದಾಗಿ ಗೌರವಧನವನ್ನು ಪಾವತಿಸಲು ವಿಳಂಬವಾಗಿರುತ್ತದೆ.

**ಸಂಖ್ಯೆ:ಮಮಇ 22 ಐಸಿಡಿ 2023**

Halappa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.